(ಸದನವು ಸಂಜೆ 6.05 ಗಂಟೆಗೆ ಮುಂದೂಡಲ್ಪಟ್ಟು ಪುನಃ ದಿನಾಂಕ 27.6.06 ರ ಮಂಗಳವಾರ ಬೆಳಿಗ್ಗೆ 11.00 ಗಂಟೆಗೆ ಸೇರಲು ನಿರ್ಧರಿಸಿತು)

ಅನುಬಂಧ–I

(ಅ) ಗೈರು ಹಾಜರಾದ ಸದಸ್ಯರುಗಳ ಚುಕ್ಕೆ ಗುರ್ತಿನ ಪ್ರಶ್ನೋತ್ತರಗಳು

ಮೈಸೂರಿನಲ್ಲಿ ಮಿನಿ ವಿಧಾನಸೌಧದ ಕಟ್ಟಡ ನಿರ್ಮಾಣದಲ್ಲಿನ ವಿಳಂಬ

132 (633) ಶ್ರೀ ಶಂಕರಲಿಂಗೇಗೌಡ ಹೆಚ್.ಎಸ್. (ಚಾಮರಾಜ): ಮಾನ್ಯ ಕಂದಾಯ ಸಚಿವರು ಈ ಕೆಳಗಿನ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಮೈಸೂರು ತಾಲ್ಲೂಕು ಕಛೇರಿ (ಮಿನಿ ವಿಧಾನಸೌಧ) ಕಟ್ಟಡ ಕಾಮಗಾರಿಯ ಅಂದಾಜು ವೆಚ್ಚ ಎಷ್ಟು :

ಆ) ಈ ಕಾಮಗಾರಿ ಪ್ರಾರಂಭಿಸಿದ್ದು ಯಾವಾಗ :

ಇ) ಯಾವಾಗ ಪೂರ್ಣಗೊಳಿಸಲು ಯೋಜಿಸಲಾಗಿದೆ;

ಈ) ಈ ಕಟ್ಟಡ ಕಾಮಗಾರಿ ಕಾರ್ಯವನ್ನು ಯಾರಿಗೆ ವಹಿಸಲಾಗಿದೆ :

ಉ) ಈ ಕಟ್ಟಡದಲ್ಲಿ ಯಾವ ಯಾವ ಕಛೇರಿಗಳು ಬರುವವು (ವಿವರ ಒದಗಿಸುವುದು)?

ಶ್ರೀ ಜಗದೀಶ್ ಶೆಟ್ಟರ್ (ಕಂದಾಯ ಸಚಿವರು) :

ಅ) ರೂ. 600.00 ಲಕ್ಷಗಳು.

ಆ) ದಿನಾಂಕ:28.4.2005 ರಂದು ಪ್ರಾರಂಭಿಸಲಾಗಿದೆ.

ಇ) 2007ನೇ ಸಾಲಿನಲ್ಲಿ ಪೂರ್ಣಗೊಳಿಸಲಾಗುವುದು.

ಈ) ಲೋಕೊಪಯೋಗಿ ಇಲಾಖೆಗೆ ವಹಿಸಲಾಗಿದೆ.

ಉ) ಕಛೇರಿ ವಿವರಗಳು

1. ಮೈಸೂರು ತಾಲ್ಲೂಕು ಕಛೇರಿ
2. ಸಹ ನಿರ್ದೇಶಕರೂ, ಭೂ ದಾಖಲೆಗಳ ಇಲಾಖಾ ಕಛೇರಿ.
3. ಉಪ ನೋಂದಣಾಧಿಕಾರಿಗಳ ಕಛೇರಿ (ಉತ್ತರ ಮತ್ತು ದಕ್ಷಿಣ)
4. ತಾಲ್ಲೂಕು ಪಂಚಾಯತಿ ಕಛೇರಿ
5. ಕೃಷಿ ಉಪ ನಿರ್ದೇಶಕರ ಕಛೇರಿ.

ಉಪಖಜಾನೆ ಕಛೇರಿಯ ಮಂಜೂರಾತಿ

134 (555) ಶ್ರೀ ಸುರೇಶ್ ಎಸ್. ಮಾರಿಹಾಳ (ಕಿತ್ತೂರು): ಮಾನ್ಯ ಉಪಮುಖ್ಯಮಂತ್ರಿಗಳು ಈ ಕೆಳಗಿನ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಕಿತ್ತೂರು ಪಟ್ಟಣದಲ್ಲಿ ಉಪ ಖಜಾನೆ ಕಛೇರಿಯನ್ನು ಮಂಜೂರು ಮಾಡುವ ಪ್ರಸ್ತಾವನೆ ಸರ್ಕಾರದ ಮುಂದೆ ಇದೆಯೇ :

ಆ) ಹಾಗಿದ್ದಲ್ಲಿ ಯಾವಾಗ ಮಂಜೂರು ಮಾಡಲಾಗುವುದು?

ಶ್ರೀ ಬಿ.ಎಸ್. ಯಡಿಯೂರಪ್ಪ (ಉಪಮುಖ್ಯಮಂತ್ರಿಗಳು) :

ಅ) ಇಲ್ಲ. ಈಗಾಗಲೇ ಕಿತ್ತೂರಿನಲ್ಲಿ ಉಪ ಖಜಾನೆಯು ದಿನಾಂಕ :29.5.1985 ರಿಂದ ಕಾರ್ಯನಿರ್ವಹಿಸುತ್ತಿದೆ.

ಆ) ಉದ್ಭವಿಸುವುದಿಲ್ಲ.

ಅನುಬಂಧ (ಆ)

396 (639) ಶ್ರೀ ಧ್ರುವನಾರಾಯಣ ಆರ್. (ಸಂತೇಮರಳ್ಳಿ): ಮಾನ್ಯ ಕಂದಾಯ ಸಚಿವರು ಈ ಕೆಳಗಿನ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

1) ಪ್ರಕೃತಿ ವಿಕೋಪದಿಂದ ರಾಜ್ಯದಲ್ಲಿ ಹಾನಿಗೊಳಗಾದ ಫಲಾನುಭವಿಗಳಿಗೆ ಅವೈಜ್ಞಾನಿಕವಾಗಿ ಅಂದಾಜು ಪಟ್ಟಿಯನ್ನು ನೀಡಿರುವುದು ಹಾಗು ಪರಿಹಾರ ನೀಡುವಲ್ಲಿ ತುಂಬಾ ವಿಳಂಬವಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ :

2) ಬಂದಿದ್ದಲ್ಲಿ, ಸರ್ಕಾರ ಈ ಬಗ್ಗೆ ಕೈಗೊಂಡಿರುವ ಕ್ರಮವೇನು ;

3) ಫಲಾನುಭವಿಗಳಿಗೆ ಹೆಚ್ಚಿನ ಪರಿಹಾರವನ್ನು ನೀಡಲುನಿರ್ಧರಿಸಲಾಗಿದೆಯೇ: ಹಾಗಿದ್ದಲ್ಲಿ ಈ ಬಗ್ಗೆ ಸರ್ಕಾರ ತೆಗೆದುಕೊಂಡಿರುವ ಕ್ರಮವೇನು?

ಶ್ರೀ ಜಗದೀಶ್ ಶೆಟ್ಟರ್ (ಕಂದಾಯ ಸಚಿವರು) :

1) ಇಲ್ಲ.

2) ಉದ್ಭವಿಸುವುದಿಲ್ಲ.

3) ಹೌದು, ಕೇಂದ್ರ ಸರ್ಕಾರದ ಪ್ರಕೃತಿ ವಿಕೋಪ ಮಾರ್ಗಸೂಚಿಗಳನ್ವಯ ಪರಿಹಾರ ನೀಡಲಾಗುತ್ತಿದೆ. ಕೇಂದ್ರ ಸರ್ಕಾರವು ನೀಡುತ್ತಿರುವ ಬೆಳೆ ಪರಿಹಾರ ಕಡಿಮೆ ಇರುವುದನ್ನು ಗಮನಿಸಿ ರಾಜ್ಯ ಸರ್ಕಾರವು ಆದೇಶ ಸಂಖ್ಯೆ :ಆರ್‌ಡಿ 176 ಟಿಎನ್‌ಆರ್ 06, ದಿನಾಂಕ:12.6.06ರಲ್ಲಿ ಪ್ರಕೃತಿ ವಿಕೋಪದಿಂದ ಹಾನಿಗೀಡಾದ ರೈತರ ಬೆಳೆಗಳಿಗೆ ನೀಡುತ್ತಿರುವ ಪರಿಹಾರಧನವನ್ನು ದ್ವಿಗುಣಗೊಳಿಸಿ ಆದೇಶ ಹೊರಡಿಸಿದೆ.

397 (640) ಶ್ರೀ ಧ್ರುವನಾರಾಯಣ ಆರ್. (ಸಂತೇಮರಳ್ಳಿ): ಮಾನ್ಯ ಅರಣ್ಯ ಜೀವಿಶಾಸ್ತ್ರ ಮತ್ತು ಪರಿಸರ ಸಚಿವರು ಈ ಕೆಳಗಿನ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಬಳ್ಳಾರಿ ಜಿಲ್ಲೆಯಲ್ಲಿ 1980ರ ಅರಣ್ಯ ಕಾಯ್ದೆಯಡಿ ಎಷ್ಟು ಅರಣ್ಯ ಪ್ರದೇಶವನ್ನು ಅರಣ್ಯ ಗಣಿ ಕೈಗಾರಿಕೆಗಾಗಿ ಮಂಜೂರು ಮಾಡಲಾಗಿದೆ :